# JANUARY 19, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- ರೈತರ ಹಿತ ಕಾಪಾಡಲು ಕೇಂದ್ರ ಸರ್ಕಾರ ಬದ್ಧ– ಕೇಂದ್ರ ಕೃಷಿ ಸಚಿವ ಶಿವರಾಜಸಿಂಗ್ ಚವ್ಹಾಣ.

- ಮಾಧ್ಯಮಗಳು ಶೋಷಿತರ ಧ್ವನಿಯಾದರೆ ಸಮಾಜದಲ್ಲಿ ಬದಲಾವಣೆ ಸಾಧ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.

- ಇದೇ ಜನವರಿ 30 ರಿಂದ ಫೆಬ್ರವರಿ 13 ರವರೆಗೆ, ರಾಜ್ಯಾದ್ಯಂತ ಸ್ಪರ್ಶ್ ಕುಷ್ಠರೋಗ ಜಾಗೃತಿ ಆಂದೋಲನ.

- ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ, ಇಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಚಿಂತನೆ ಹಂಚಿಕೊಳ್ಳಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ.

ಈಗ ವಾರ್ತೆಗಳ ವಿವರ

*******

ರೈತರ ಹಿತ ಕಾಪಾಡಲು ಮತ್ತು ಬದುಕಿನ ಗುಣಮಟ್ಟ ಸುಧಾರಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜಸಿಂಗ್ ಚವ್ಹಾಣ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಆಯೋಜನೆಗೊಂಡಿದ್ದ ಅಡಿಕೆ ಬೆಳೆಗಾರರ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಅಡಿಕೆ ಕರ್ನಾಟಕದ ಪ್ರಮುಖ ವಾಣಿಜ್ಯ ಬೆಳೆ. ಆದರೆ ಇತ್ತೀಚಿನ ದಿನಗಳಲ್ಲಿ ಅಡಕೆ ಬೆಳೆಹಾಗೂ ಬೆಳೆಗಾರ ಸಾಕ ಸ್ಟ ಸಮಸ್ಯೆ ಎದುರಿಸುವಂತಾಗಿದೆ. ಈ ನಿಟ್ಟಿನಲ್ಲಿ ವಿದೇಶಗಳಿಂದ ಆಮದಾಗುತ್ತಿರುವ ಅಡಿಕೆಗೆ ಹೆಚ್ಚಿನ ತೆರಿಗೆ ವಿಧಿಸಲಾಗುತ್ತಿದೆ. ಅಡಿಕೆ ಆಮದು ತಡೆಯಲು ಈ ಹಿಂದೆ ಇದ್ದ ಕೆಜಿಗೆ 251 ರೂಪಾಯಿಗಳನ್ನು 351 ಕ್ಕೆ ಹೆಚ್ಚಿಸಲಾಗಿದೆ. ಅಗತ್ಯಬಿದ್ದರೆ ಅದನ್ನು ಇನ್ನ ಸ್ಟ ಹೆಚ್ಚಿಸಲಾಗುವುದು ಎಂದರು.

ಶಿವರಾಜಸಿಂಗ್ ಚವ್ಹಾಣ ಧ್ವನಿ–30 ಸೆಕೆಂಡ್

ಕಳ್ಳ ಮಾರ್ಗದಿಂದ ಬರುವ ಅಡಕೆ ತಡೆಯಲು ಮತ್ತ ಸ್ಟ ಕಠಿಣ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಸಚಿವರು ಹೇಳಿದರು.

*******

ದುರ್ಬಲ ಮತ್ತು ಅನ್ಯಾಯಕ್ಕೆ ಒಳಗಾದ ಸಮುದಾಯಗಳಿಗೆ ಮಾಧ್ಯಮಗಳು ಧ್ವನಿಯಾದರೆ ಸಮಾಜದಲ್ಲಿ ಬದಲಾವಣೆ ಬರಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನ ಸಿದ್ಧಾರ್ಥ ತಾಂತ್ರಿಕ ಕಾಲೇಜಿನಲ್ಲಿ ನಡೆದ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ 39 ನೇ ರಾಜ್ಯ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮಾಧ್ಯಮಗಳು ನಮ್ಮಲ್ಲೇ ಮೊದಲು ಎನ್ನುವ ಪ್ರವೃತ್ತಿ ಬಿಟ್ಟು, ನ್ಯಾಯಯುತ, ಮೌಲ್ಯಯುತ ಸುದ್ದಿಗಳಿಗೆ ಆದ್ಯತೆ ನೀಡಬೇಕು ಎಂದರು. ಪತ್ರಿಕಾ ಸ್ವಾತಂತ್ರ್ಯ, ಅಭಿವ್ಯಕ್ತಿ ಸ್ವಾತಂತ್ರ್ಯ ಗೌರವಿಸುವ ಸರ್ಕಾರ ನಮ್ಮದು, ಪತ್ರಿಕಾ ಧರ್ಮಕ್ಕೆ ಧಕ್ಕೆಯಾಗದಂತೆ ಕಾರ್ಯನಿರ್ವಹಿಸಬೇಕಿರುವುದು ಪತ್ರಕರ್ತರ ಜವಾಬ್ದಾರಿ ಎಂದು ಮುಖ್ಯಮಂತ್ರಿ ಹೇಳಿದರು.

*******

ತಾಲೂಕು ಆಸ್ಪತ್ರೆಗಳನ್ನು ಜಿಲ್ಲಾ ಆಸ್ಪತ್ರೆಗಳಂತೆ ಉನ್ನತೀಕರಣಗೊಳಿಸಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಳ್ತಂಗಡಿ ತಾಲೂಕಿನ ಮಚ್ಚಿನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ಮತ್ತು ನೂತನ ವಸತಿಗೃಹಗಳ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಅನುದಾನ ನೀಡುತ್ತಿದೆ. ಬೆಳ್ತಂಗಡಿ ತಾಲೂಕಿನ ಆಸ್ಪತ್ರೆಗಳ ವಿವಿಧ ಕಾಮಗಾರಿಗಳಿಗೆ 4 ಕೋಟಿ ರೂಪಾಯಿ ಅನುದಾನ ನೀಡಲಾಗಿದ್ದು, 40 ಲಕ್ಷ ರೂಪಾಯಿ ವೆಚ್ಚದಲ್ಲಿ ತಾಲೂಕು ಆಸ್ಪತ್ರೆಯ ಅಭಿವೃದ್ಧಿ ನಡೆಯುತ್ತಿದೆ. ಒಟ್ಟಾರೆ ಬೆಳ್ತಂಗಡಿಯಲ್ಲಿ 4.7 ಕೋಟಿ ರೂಪಾಯಿಗಳ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದರು.

*******

ರೈತರಿಗೆ ಕೀಟ ಮತ್ತು ರೋಗ ನಿರ್ವಹಣೆಯೊಂದಿಗೆ ಪೋ 'ಕಾಂಶ ಸಮತೋಲನದ ಬಗ್ಗೆ ವೈಜ್ಞಾನಿಕ ಸಲಹೆಗಳನ್ನು ನೀಡಲು e-SAP ತಂತ್ರಜ್ಞಾನ ಅಭಿವೃದ್ಧಿಪಡಿಸಲಾಗಿದೆ ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ಕೃಷಿ ವಿಶ್ವವಿದ್ಯಾನಿಲಯಗಳ ವಿಜ್ಞಾನಿಗಳು ಹಾಗೂ ಕೃಷಿ ಇಲಾಖೆಯ ತಾಂತ್ರಿಕ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಈ ತಂತ್ರಜ್ಞಾನ ಅಭಿವೃದ್ಧಿಪಡಿಸಲಾಗಿದೆ. ರೈತರಿಗೆ 92,782 ವಿವಿಧ ತಾಂತ್ರಿಕ ಸಲಹಾ ಸೌಲಭ್ಯ ಒದಗಿಸುತ್ತಿದ್ದು, 54,889ಕ್ಕೂ ಹೆಚ್ಚು ರೈತರು ಇದರ ಲಾಭ ಪಡೆಯುತ್ತಿದ್ದಾರೆ ಎಂದು ತಿಳಿಸಿದ್ದಾರೆ.

*******

ಮಹಾತ್ಮಗಾಂಧಿಜೀ ಅವರ ವಿಚಾರಧಾರೆಗಳನ್ನು ದೇಶದ ಮೂಲೆಮೂಲೆಗೆ ತಿಳಿಸುವ ಉದ್ದೇಶದಿಂದ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಕಾರ್ಯಕ್ರಮವನ್ನು ಬೆಳಗಾವಿಯಲ್ಲಿ ಆಯೋಜಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ 21 ರಂದು ನಡೆಯುವ ಸಮಾವೇಶದ ಪೂರ್ವಭಾವಿ ಸಭೆ ನಡೆಸಲಾಗಿದ್ದು, ಧಾರವಾಡ ಜಿಲ್ಲೆಯಿಂದಲೇ 75 ಸಾವಿರಕ್ಕೂ ಅಧಿಕ ಜನರು

ಭಾಗವಹಿಸುವ ನಿರೀಕ್ಷೆಯಿದೆ ಎಂದರು. ಇದೇ ವೇಳೆ ರಾಜ್ಯದ 100 ಕಾಂಗ್ರೆಸ್ ಕಚೇರಿಗಳಿಗೆ ಭೂಮಿಪೂಜೆ ನೆರವೇರಿಸಲು ಸಿದ್ಧತೆ ನಡೆಸಿದ್ದೇವೆ ಎಂದು ಡಿ.ಕೆ.ಶಿವಕುಮಾರ ತಿಳಿಸಿದರು.

*******

ಸ್ವಾಮಿತ್ವ ಯೋಜನೆಯಡಿ ಜಿಲ್ಲೆಯ ಎಲ್ಲ 375 ಗ್ರಾಮಗಳನ್ನು ಡ್ರೋನ್ ಮೂಲಕ ಸರ್ವೆ ಮಾಡಿ, ವಿವಿಧ ಆಸ್ತಿಗಳನ್ನು ನಿಖರವಾಗಿ ಗುರುತಿಸಲಾಗುತ್ತಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಕಲಘಟಗಿ ತಾಲೂಕಿನ ಮಡಕಿಹೊನ್ನಳ್ಳಿ ಗ್ರಾಮದಲ್ಲಿ ಸ್ವಾಮಿತ್ವ ಯೋಜನೆಯಡಿ ಡ್ರೋನ್ ಸರ್ವೆ ಕಾರ್ಯಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಸ್ವಾಮಿತ್ವ ಯೋಜನೆಯಡಿ ರಾಜ್ಯ ಸರಕಾರ ರಾಜ್ಯದ ಪ್ರತಿ ಗ್ರಾಮವನ್ನು ಸಮೀಕ್ಷೆ ಮಾಡಿ, ಕಾನೂನಾತ್ಮಕವಾಗಿ ಗ್ರಾಮ ನಿವಾಸಿಗಳ ಆಸ್ತಿ ಗುರುತಿಸುತ್ತಿದೆ. ಡ್ರೋನ್ ಮೂಲಕ ಏರೀಯಲ್ ಸರ್ವೆ ಮತ್ತು ರೊವರ್ ಸರ್ವೆ ಎರಡನ್ನು ಮಾಡಲಾಗುತ್ತದೆ ಎಂದು ಸಚಿವರು ಹೇಳಿದರು.

*******

ಆಧುನಿಕ ತಂತ್ರಜ್ಞಾನ ಬಳಸಿ, ದುಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು, ಡಿಜಿ ದಾಖಲೆಗಳಾಗಿ ಪರವರ್ತಿಸಲು ಭೂ ಸುರಕ್ಷಾ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾಗಿದೆ ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಶಿವಮೊಗ್ಗ ತಹಶೀಲ್ದಾರರ ಕಚೇರಿಯಲ್ಲಿ ಭೂಸುರಕ್ಷಾ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಹಳೆಯ ದಾಖಲೆಗಳ ಸಂರಕ್ಷಣೆಯಿಂದಾಗಿ ದಾಖಲೆಗಳ ತಿದ್ದುಪಡಿ, ಕಳುವು ಅಸಾಧ್ಯವಾಗಲಿದೆ. ಆಡಳಿತಕ್ಕೆ ಡಿಜಿಟಲ್ ಸ್ಪರ್ಶ ನೀಡುವುದರಿಂದ ಉತ್ತಮ ಜನಪರ ಆಡಳಿತ ನೀಡಲು ಸಾಧ್ಯವಾಗಲಿದೆ. ಹಳೆಯ ದಾಖಲೆಗಳನ್ನು ರಕ್ಷಿಸುವುದರ ಜೊತೆಗೆ ನಕಲಿ ಭೂ ದಾಖಲೆಗಳು ಸೃಷ್ಠಿಯಾಗುವುದನ್ನು ತಪ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದು ಸಚಿವರು ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ 11 ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ 118 ನೇ ಆವೃತ್ತಿಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್

ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾ ಿಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

*******

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಇದೇ ಜನವರಿ 30 ರಿಂದ ಫೆಬ್ರವರಿ 13 ರವರೆಗೆ ರಾಜ್ಯಾದ್ಯಂತ ಸ್ಪರ್ಶ್ ಕುಷ್ಠರೋಗ ಜಾಗೃತಿ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ತಿಳಿಸಿದ್ದಾರೆ. ರಾಜ್ಯ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿಯ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 2024 ರ ಡಿಸೆಂಬರ್ ಅಂತ್ಯಕ್ಕೆ 1785 ಕುಷ್ಠರೋಗದ ಹೊಸ ಪ್ರಕರಣಗಳು ಪತ್ತೆಯಾಗಿವೆ. ಕುಷ್ಠರೋಗ ಪತ್ತೆಹಚ್ಚಿ ಇದಕ್ಕೆ ಸೂಕ್ತ ಚಿಕಿತ್ಸೆ ನೀಡುವುದು ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದರು. ಆರಂಭಿಕ ಹಂತದಲ್ಲಿ ರೋಗ ಪತ್ತೆಯಾದಲ್ಲಿ ಈ ರೋಗವನ್ನು ಗುಣಪಡಿಸಬಹುದಾಗಿದೆ. ಕುಷ್ಠರೋಗದ ಬಗ್ಗೆ ಜನರಲ್ಲಿ ಇರುವ ಕೀಳರಿಮೆ ಹೋಗಲಾಡಿಸಿ, ಈ ಆಂದೋಲನದ ಮೂಲಕ ಅರಿವು ಮೂಡಿಸಲು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

*******

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃ ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದ್ದಾರೆ. ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ಈ ಹಗರಣ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಹೆಸರು ಪ್ರಕರಣದಲ್ಲಿ ತಳಕು ಹಾಕಿಕೊಂಡಿದೆ. ತನಿಖೆ ಬಳಿಕ ತಪ್ಪಿತಸ್ಥರಲ್ಲ ಎಂದರೆ ಮತ್ತೇ ಅಧಿಕಾರಕ್ಕೆ ಬರಲಿ. ಸದ್ಯಕ್ಕೆ ಅವರು ರಾಜೀನಾಮೆ ನೀಡಿ ನಿಷ್ಪಕ್ಷ ತನಿಖೆಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

*******

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಸೊಂಟ ಹಾಗೂ ಮೊಣಕಾಲು ಕೀಲು ಬದಲಾವಣೆ ಶಸ್ತ್ರಚಿಕಿತ್ಸೆ ಆರಂಭಿಸಲಾಗಿದೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಸಂಧ್ಯಾ ಕಾಲದ ಬಡ ರೋಗಿಗಳಿಗೆ ಇದು ವರದಾನವಾಗಲಿದ್ದು, ಅರ್ಹ ಬಿ.ಪಿ.ಎಲ್ ಕಾರ್ಡುದಾರಿಗೆ ಎ.ಬಿ.ಆರ್.ಕೆ ಯೋಜನೆಯಡಿ ಉಚಿತವಾಗಿ ಶಸ್ತ್ರಚಿಕಿತ್ಸೆ ನಡೆಸಲಾಗುವುದು ಎಂದರು.

*******

ಸಮಾಜದಲ್ಲಿ ಕೋಮು ಸೌಹಾರ್ದತೆ ಮೂಡಿಸುವ ನಿಟ್ಟಿನಲ್ಲಿ ಫೆಬ್ರವರಿ ತಿಂಗಳಿನಲ್ಲಿ ರಾಜ್ಯವ್ಯಾಪಿ ಸಮಾವೇಶ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ನಿಸಾರ್ ಅಹ್ಮದ್ ತಿಳಿಸಿದ್ದಾರೆ. ಮಂಗಳೂರಿನ

ಅಲ್ಪಸಂಖ್ಯಾತ ಮುಖಂಡರೊಂದಿಗಿನ ಸಭೆಯಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಶಾಂತಿ ನೆಲೆಗೊಳ್ಳಬೇಕಾದರೆ ಕೋಮು ಸಾಮರಸ್ಯ ಅಗತ್ಯ. ಆ ಹಿನ್ನೆಲೆಯಲ್ಲಿ ಎಲ್ಲ ಸಮುದಾಯದ ಮುಖಂಡರನ್ನು ಒಗ್ಗೂಡಿಸಿ, ಚಿಂತನೆ ನಡೆಸಲಾಗುತ್ತಿದೆ ಎಂದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಬಿಹಾರದ ಪಾಟ್ನಾದಲ್ಲಿ ನಾಳೆ ಮತ್ತು ನಾಡಿದ್ದು ನಡೆಯಲಿರುವ **85** ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನದಲ್ಲಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಭಾಗವಹಿಸಲಿದ್ದಾರೆ.

ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕು ವಕೀಲರ ಸಂಘದ ವತಿಯಿಂದ ರೂಪಿಸಲಾದ ಗ್ರಂಥಾಲಯವನ್ನು ಶಾಸಕ ಸಿ.ಪಿ.ಯೋಗೇಶ್ವರ್ ನಿನ್ನೆ ಉದ್ಘಾಟಿಸಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರೈತರ ಹಿತ ಕಾಪಾಡಲು ಕೇಂದ್ರ ಸರ್ಕಾರ ಬದ್ಧ– ಕೇಂದ್ರ ಕೃಷಿ ಸಚಿವ ಶಿವರಾಜಸಿಂಗ್ ಚವ್ಹಾಣ.

ಮಾಧ್ಯಮಗಳು ಶೋಷಿತರ ಧ್ವನಿಯಾದರೆ ಸಮಾಜದಲ್ಲಿ ಬದಲಾವಣೆ ಸಾಧ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.

ಉತ್ತಮ ಆಡಳಿತ ವ್ಯವಸ್ಥೆಗೆ ನ್ಯಾಯಾಂಗದ ಕೊಡುಗೆ ಅಗತ್ಯ–ಹೈಕೋರ್ಟ ನ್ಯಾಯಮೂರ್ತಿ ಎಚ್.ಪಿ.ಸಂದೇಶ.

ಇದೇ ಜನವರಿ **30** ರಿಂದ ಫೆಬ್ರವರಿ **13** ರವರೆಗೆ, ರಾಜ್ಯಾದ್ಯಂತ ಸ್ಪರ್ಶ್ ಕುಷ್ಠರೋಗ ಜಾಗೃತಿ ಆಂದೋಲನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ **7** ಗಂಟೆ **35** ನಿಮಿಷಕ್ಕೆ
****END****